# Bangalore
# Regional News
# 15.01.2025 / 2.30 P.M.
## ಆಕಾಶವಾಣಿ ಬೆಂಗಳೂರು
## ಪ್ರದೇಶ ಸಮಾಚಾರ

ಮುಖ್ಯಾಂಶಗಳು

1. ಮುಡಾ ನಿವೇಶನ ಹಂಚಿಕೆ ಪ್ರಕರಣ; ಸಿಬಿಐ ತನಿಖೆಗೆ ಕೋರಿದ್ದ ಅರ್ಜಿ ಇದೇ 27ಕ್ಕೆ ಮುಂದೂಡಿದ ಉಚ್ಚನ್ಯಾಯಾಲಯ
2. ಗೋವಿನ ಮೇಲಿನ ಹಲ್ಲೆ ಪ್ರಕರಣ; ತಪ್ಪಿತಸ್ಥರ ವಿರುದ್ಧ ಕಾನೂನು ಕ್ರಮ ಕೈಗೊಳ್ಳಲು ಸರ್ಕಾರ ಬದ್ಧ – ಗೃಹ ಸಚಿವ ಪರಮೇಶ್ವರ್
3. ಅಗ್ನಿ ಅವಘಡ ಸಂಭವಿಸಿದ ಬೆಂಗಳೂರು ಜೈವಿಕ ನಾವೀನ್ಯತೆ ಕೇಂದ್ರ ಪರಿಶೀಲಿಸಿದ ಗೃಹ ಸಚಿವರಿಂದ ಪರಿಶೀಲನೆ
4. ಇಂದು ಭಾರತೀಯ ಸೇನಾ ದಿನ; ರಾಷ್ಟ್ರಪತಿ, ಪ್ರಧಾನಿ ಸೇರಿದಂತೆ ಗಣ್ಯರಿಂದ ಶುಭಾಶಯ

*******************

ಮೈಸೂರು ನಗರಾಭಿವೃದ್ಧಿ ಪ್ರಾಧಿಕಾರ–ಮುಡಾ ನಿವೇಶನ ಹಂಚಿಕೆ ಪ್ರಕರಣದಲ್ಲಿ ಮುಖ್ಯಮಂತ್ರಿ ಸಿದ್ದರಾಮಯ್ಯ ಮತ್ತು ಅವರ ಕುಟುಂಬದ ಸದಸ್ಯರ ವಿರುದ್ಧದ ತನಿಖೆಯನ್ನು ಸಿಬಿಐಗೆ ವಹಿಸಬೇಕು' ಎಂದು ಅರ್ಜಿ ವಿಚಾರಣೆಯನ್ನು ಉಚ್ಚನ್ಯಾಯಾಲಯ ಜನವರಿ 27ಕ್ಕೆ ಮುಂದೂಡಿದೆ.

ಮುಡಾ ನಿವೇಶನ ಹಂಚಿಕೆ ಹಗರಣವನ್ನು ಸಿಬಿಐ ತನಿಖೆಗೆ ವರ್ಗಾಯಿಸುವಂತೆ ಕೋರಿ ಸಾಮಾಜಿಕ ಕಾರ್ಯಕರ್ತ ಸ್ನೇಹಮಯಿ ಕೃಷ್ಣ ಅವರು ಸಲ್ಲಿಸಿದ್ದ ಅರ್ಜಿಯ ವಿಚಾರಣೆ ನಡೆಸಿದ ನ್ಯಾಯಮೂರ್ತಿ ಎಂ. ನಾಗಪ್ರಸನ್ನ ಅವರು ತನಿಖಾ ವರದಿಯನ್ನು ಜನವರಿ 27ರೊಳಗೆ ನ್ಯಾಯಾಲಯಕ್ಕೆ ಸಲ್ಲಿಸುವಂತೆ ಲೋಕಾಯುಕ್ತಕ್ಕೆ ಸೂಚಿಸಿದ್ದಾರೆ.

ಮುಖ್ಯಮಂತ್ರಿ ಸಿದ್ದರಾಮಯ್ಯ ಪರ ಹಿರಿಯ ವಕೀಲ ರವಿವರ್ಮ ಕುಮಾರ್, ಅಭಿಷೇಕ್ ಮನು ಸಿಂಘ್ವಿ ವಾದ ಮಂಡಿಸಿದರೆ, ಅರ್ಜಿದಾರರ ಪರ ಮಣಿಂದರ್ ಸಿಂಗ್ ವಾದ ಮಂಡಿಸಿದರು.

*******************

ಗೋವಿನ ಮೇಲಿನ ಹಲ್ಲೆ ಪ್ರಕರಣಕ್ಕೆ ಸಂಬಂಧಿಸಿದಂತೆ ಸೂಕ್ತ ತನಿಖೆ ಕೈಗೊಳ್ಳಲಾಗಿದೆ ಎಂದು ಗೃಹ ಸಚಿವ ಡಾ. ಜಿ ಪರಮೇಶ್ವರ್ ತಿಳಿಸಿದ್ದಾರೆ.

ಬೆಂಗಳೂರಿನಲ್ಲಿಂದು ಸುದ್ದಿಗಾರರಿಗೆ ವಿಷಯ ತಿಳಿಸಿದ ಅವರು, ಈ ಪ್ರಕರಣಕ್ಕೆ ಸಂಬಂಧಿಸಿದಂತೆ ಈಗಾಗಲೇ ಆರೋಪಿಯೊಬ್ಬನನ್ನು ಬಂಧಿಸಿ, ವಿಚಾರಣೆಗೆ ಒಳಪಡಿಸಲಾಗಿದೆ. ಪ್ರಕರಣದಲ್ಲಿ ಬೇರೆಯವರ ಕೈವಾಡ ಇರುವ ಬಗ್ಗೆ ತನಿಖೆ ನಡೆಸಲಾಗುತ್ತಿದೆ. ತಪ್ಪಿತಸ್ಥರ ವಿರುದ್ಧ ಸೂಕ್ತ ಕಾನೂನು ಕ್ರಮ ಜರುಗಿಸಲಾಗುವುದು ಎಂದು ಸ್ಪಷ್ಟಪಡಿಸಿದ್ದಾರೆ.

*******************

ಚಾಮರಾಜಪೇಟೆಯಲ್ಲಿ ಹಸುಗಳ ಮೇಲಿನ ಹಲ್ಲೆ ಪ್ರಕರಣಕ್ಕೆ ಸಂಬಂಧಿಸಿದಂತೆ ಸಚಿವ ಜಮೀರ್ ಅಹ್ಮದ್ ಖಾನ್ ಅವರು ಜಾನುವಾರುಗಳ ಮಾಲೀಕರಿಗೆ ಇಂದು ಮೂರು ಹಸುಗಳನ್ನು ಉಡುಗೊರೆಯಾಗಿ ನೀಡಿದ್ದಾರೆ.

ಇದರೊಂದಿಗೆ ಕುಟುಂಬಕ್ಕೆ ಮೂರು ಲಕ್ಷ ರೂಪಾಯಿಗಳ ಪರಿಹಾರವನ್ನು ಜಮೀರ್ ನೀಡಿದ್ದಾರೆ.

ಚಾಮರಾಜಪೇಟೆಯ ವಿನಾಯಕನಗರ ಪ್ರದೇಶದಲ್ಲಿ ಅಪರಿಚಿತ ದುಷ್ಕರ್ಮಿಗಳು ಮೂರು ಹಸುಗಳ ಕೆಚ್ಚಲು ಕತ್ತರಿಸಿದ್ದರು. ಈ ಹಿನ್ನೆಲೆಯಲ್ಲಿ ಬೆಂಗಳೂರು ಪೊಲೀಸರು ಪ್ರಕರಣ ದಾಖಲಿಸಿಕೊಂಡಿದ್ದಾರೆ. ಕಾಟನ್‌ಪೇಟೆ ಪೊಲೀಸ್ ಠಾಣೆಯಲ್ಲಿ ದೂರು ದಾಖಲಾಗಿದೆ.

*******************

ಗೋವುಗಳ ಕೆಚ್ಚಲು ಕತ್ತರಿಸುವ ಮೂಲಕ ಕೋಟ್ಯಂತರ ಹಿಂದೂಗಳ ಭಾವನೆಗೆ ಧಕ್ಕೆ ಉಂಟು ಮಾಡಲಾಗಿದೆ ಎಂದು ಬಿಜೆಪಿ ರೈತ ಮೋರ್ಚಾದ ರಾಜ್ಯ ಕಾರ್ಯದರ್ಶಿ ಸತೀಶ್ ಕಡತನಮಲೆ ಖಂಡಿಸಿದ್ದಾರೆ.

ಗೋವುಗಳ ಮೇಲೆ ಇತ್ತೀಚೆಗೆ ನಡೆಯುತ್ತಿರುವ ಅಮಾನುಷ ಕ್ರೌರ್ಯವನ್ನು ಖಂಡಿಸಿ ಬೆಂಗಳೂರಿನ ಸ್ವಾತಂತ್ರ್ಯ ಉದ್ಯಾನವನದಲ್ಲಿ ರಾಜ್ಯ ಬಿಜೆಪಿ ರೈತ ಮೋರ್ಚಾ ವತಿಯಿಂದ ಪ್ರತಿಭಟನೆ ನಡೆಯಿತು.

ಬೆಂಗಳೂರಿನ ಚಾಮರಾಜಪೇಟೆಯಲ್ಲಿ ಹಸುವಿನ ಮೇಲಿನ ಹಲ್ಲೆ ಖಂಡಿಸಿ ಮಂಡ್ಯ ಜಿಲ್ಲಾ ಬಿಜೆಪಿ ರೈತ ಮೋರ್ಚಾ ಕಾರ್ಯಕರ್ತರು ಪ್ರತಿಭಟನೆ ನಡೆಸಿದರು. ಕೂಡಲೇ ನೈಜ ಆರೋಪಿಗಳನ್ನು ಬಂಧಿಸುವಂತೆ ಆಗ್ರಹಿಸಿದರು.

*******************

ಬೆಂಗಳೂರಿನ ಎಲೆಕ್ಟ್ರಾನಿಕ್ ಸಿಟಿಯಲ್ಲಿರುವ ಜೈವಿಕ ನಾವೀನ್ಯತೆ ಕೇಂದ್ರದಲ್ಲಿ ಅಗ್ನಿ ಅವಘಡ ಸಂಭವಿಸಿದ ಸ್ಥಳಕ್ಕೆ ಗೃಹ ಸಚಿವ ಡಾ. ಜಿ.ಪರಮೇಶ್ವರ್ ಇಂದು ಭೇಟಿ ನೀಡಿ ಪರಿಶೀಲನೆ ನಡೆಸಿದರು.

ದುರ್ಘಟನೆಯ ಕುರಿತು ಅಧಿಕಾರಿಗಳಿಂದ ಮಾಹಿತಿ ಪಡೆದರು. ಬಳಿಕ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಮಿಥೆನಾಲ್ ಸೋರಿಕೆಯಿಂದ ಅಗ್ನಿ ಅವಘಡ ಸಂಭವಿಸಿದೆ ಎಂಬುದು ಕಂಡು ಬಂದಿದೆ. ಒಂದು ಘಟಕ ಸಂಪೂರ್ಣವಾಗಿ ನಾಶವಾಗಿದ್ದು, ಇತರೆ ನಾವೀನ್ಯ ಕೇಂದ್ರಗಳು ಹಾನಿಗೊಳಗಾಗಿವೆ ಎಂದು ತಿಳಿಸಿದರು.

ಅಂದಾಜು 100 ಕೋಟಿ ರೂಪಾಯಿ ಮೌಲ್ಯದ ವಸ್ತುಗಳು ಹಾನಿಯಾಗಿದೆ. ಸುಮಾರು 60 ವಿವಿಧ ಕಂಪನಿಗಳು ಇಲ್ಲಿ ಕಾರ್ಯ ನಿರ್ವಹಿಸುತ್ತಿದ್ದು 20 ಲ್ಯಾಬ್‌ಗಳಿಗೆ ಹಾನಿಯಾಗಿದೆ. ಘಟನೆ ಹೇಗೆ ಸಂಭವಿಸಿತು ಎಂಬುದರ ಕುರಿತು ಪೊಲೀಸರು ತನಿಖೆ ನಡೆಸಿ, ವರದಿ ನೀಡಲಿದ್ದಾರೆ ಎಂದು ಸಚಿವರು ಸ್ಪಷ್ಟಪಡಿಸಿದರು.

*******************

ಮುಖ್ಯಮಂತ್ರಿ ಸಿದ್ದರಾಮಯ್ಯ ಅವರಿಗೆ ಕುರ್ಚಿಗೆ ಕಂಟಕ ಬಂದಾಗ ಜಾತಿ ಗಣತಿ ನೆನಪಾಗುತ್ತದೆ ಎಂದು ಪ್ರತಿಪಕ್ಷ ನಾಯಕ ಆರ್.ಅಶೋಕ ವ್ಯಂಗ್ಯವಾಡಿದ್ದಾರೆ.

ಸಾಮಾಜಿಕ ಜಾಲತಾಣದಲ್ಲಿ ಪೋಸ್ಟ್ ಮಾಡಿರುವ ಅವರು, ಜಾತಿ ಜನಗಣತಿ ಬಗ್ಗೆ ಬಿಜೆಪಿ ಪಕ್ಷಕ್ಕಾಗಲಿ ತಮಗಾಗಲಿ ಯಾವ ವಿರೋಧವೂ ಇಲ್ಲ. ಬಿಜೆಪಿಯ ಮೂಲಸಿದ್ಧಾಂತವಾದ 'ಅಂತ್ಯೋದಯ'ದ ಪರಿಕಲ್ಪನೆಯಲ್ಲೇ ತಳ ಸಮುದಾಯಗಳನ್ನ ರಾಜಕೀಯವಾಗಿ, ಸಾಮಾಜಿಕವಾಗಿ, ಶೈಕ್ಷಣಿಕವಾಗಿ, ಆರ್ಥಿಕವಾಗಿ ಸಮಾಜದ ಮುಖ್ಯವಾಹಿನಿಗೆ ತರಬೇಕು ಎಂಬ ಸಾಮಾಜಿಕ ನ್ಯಾಯದ ಬದ್ಧತೆ ಅಡಗಿದೆ. ಅದನ್ನ ಸಾಕಾರಗೊಳಿಸುವ ಯಾವ ಪ್ರಾಮಾಣಿಕ ಪ್ರಯತ್ನಕ್ಕಾದರೂ ನಮ್ಮ ಬೆಂಬಲ ಸದಾ ಇದ್ದೇ ಇರುತ್ತದೆ ಎಂದು ತಿಳಿಸಿದ್ದಾರೆ.

ಆದರೆ ರಾಜಕೀಯ ಚದುರಂಗದಾಟದಲ್ಲಿ ಜಾತಿ ಜನಗಣತಿಯನ್ನು ದಾಳವಾಗಿ ಬಳಸಿಕೊಳ್ಳುವುದಕ್ಕೆ ನಮ್ಮ ವಿರೋಧವಿದೆ ಎಂದು ಹೇಳಿದ್ದಾರೆ.

*******************

ದೇಶಕ್ಕಾಗಿ ಸಶಸ್ತ್ರ ಪಡೆಗಳು ನೀಡುವ ಬಲಿದಾನ ಮತ್ತು ತ್ಯಾಗಗಳನ್ನು ಗೌರವಿಸಿ ಇಂದು ದೇಶಾದ್ಯಂತ ಸೇನಾ ದಿನವನ್ನು ಆಚರಿಸಲಾಗುತ್ತಿದೆ. ಇದು ಭಾರತೀಯ ಸೈನಿಕರ ಧೈರ್ಯ, ಬದ್ಧತೆ ಮತ್ತು ಮಾತೃ ಪ್ರೇಮ ಸ್ಮರಿಸಲು ಸೇನಾ ದಿನ ಆಚರಿಸಲಾಗುತ್ತದೆ.

1949 ರಲ್ಲಿ ಜನರಲ್ ಕೆ.ಎಂ.ಕಾರ್ಯಪ್ಪ, ಕೊನೆಯ ಬ್ರಿಟಿಷ್ ಕಮಾಂಡರ್–ಇನ್–ಚೀಫ್‌ನಿಂದ ಭಾರತೀಯ ಸೈನ್ಯದ ಕಮಾಂಡರ್ ಆಗಿ ಅಧಿಕಾರ ವಹಿಸಿಕೊಂಡು, ಸ್ವತಂತ್ರ ಭಾರತದ ಮೊದಲ ಭಾರತೀಯ ಕಮಾಂಡರ್–ಇನ್–ಚೀಫ್ ಆದ ಸ್ಮರಣಾರ್ಥ ಈ ದಿನವನ್ನು ಸೇನಾ ದಿನವನ್ನಾಗಿ ಆಚರಿಸಲಾಗುತ್ತದೆ.

ರಾಷ್ಟ್ರಪತಿ ದ್ರೌಪದಿ ಮುರ್ಮು, ಪ್ರಧಾನಿ ನರೇಂದ್ರ ಮೋದಿ ಸೇರಿದಂತೆ ಹಲವು ಗಣ್ಯರು ಸೇನಾ ಸಿಬ್ಬಂದಿ ಮತ್ತು ಮಾಜಿ ಸೈನಿಕರಿಗೆ ಸೇನಾ ದಿನದ ಶುಭಾಶಯ ಕೋರಿದ್ದಾರೆ.

*******************

ದಾವಣಗೆರೆ ಮೂಲಕ ಹಾದು ಹೋಗಿರುವ ರಾಷ್ಟ್ರೀಯ ಹೆದ್ದಾರಿ 48ರಲ್ಲಿ ನಿರ್ಮಾಣ ಮಾಡಿರುವ ಕೆಳ ಸೇತುವೆ ಕಾಮಗಾರಿಯನ್ನು ನವದೆಹಲಿಯ ರಾಷ್ಟ್ರೀಯ ಹೆದ್ದಾರಿ ಪ್ರಾಧಿಕಾರದ ಅಧಿಕಾರಿಗಳೊಂದಿಗೆ ಸಂಸದೆ ಡಾ.ಪ್ರಭಾ ಮಲ್ಲಿಕಾರ್ಜುನ್ ಪರಿಶೀಲನೆ ನಡೆಸಿದರು

ಅವೈಜ್ಞಾನಿಕವಾಗಿ ನಿರ್ಮಾಣಗೊಂಡಿರುವ ಸೇತುವೆಯ ಮೂಲಕ ಹಾದು ಹೋಗಲು ಅಂಬ್ಯುಲೆನ್ಸ್ ಮತ್ತು ಇತರೆ ತುರ್ತು ವಾಹನಗಳಿಗೆ ಅಡ್ಡಿ ಉಂಟಾಗಿರುವ ಕುರಿತು ಸಂಸದರು ಹೆದ್ದಾರಿ ಪ್ರಾಧಿಕಾರದ ಅಧಿಕಾರಿಗಳ ಗಮನ ಸೆಳೆದರು.

ಅವೈಜ್ಞಾನಿಕ ಕಾಮಗಾರಿ ಕುರಿತು ಸಂಸದರು ಸಂಸತ್ತಿನ ಚಳಿಗಾಲದ ಅಧಿವೇಶನದಲ್ಲಿ ಕೇಂದ್ರ ಹೆದ್ದಾರಿ ಸಚಿವ ನಿತಿನ್ ಗಡ್ಕರಿ ಅವರ ಗಮನಕ್ಕೆ ತಂದಿದ್ದರು.

*******************

ಎಂಡೋಸಲ್ಫಾನ್ ಪೀಡಿತರು ಸರ್ಕಾರದ ಸೌಲಭ್ಯಗಳಿಂದ ವಂಚಿತರಾಗಬಾರದು ಎಂದು ಸಚಿವ ಮಂಕಾಳ ವೈದ್ಯ ತಿಳಿಸಿದ್ದಾರೆ. ಉತ್ತರಕನ್ನಡ ಜಿಲ್ಲೆಯ ಭಟ್ಕಳ ತಾಲ್ಲೂಕಿನ ಶಿರಾಲಿಯಲ್ಲಿ ಎಂಡೋಸಲ್ಫಾನ್ ಪೀಡಿತರ ಶಿಬಿರ ಉದ್ಘಾಟಿಸಿ ಮಾತನಾಡಿದ ಅವರು, ಪೀಡಿತರೂ ಮಾಸಾಶನ, ಆಸ್ಪತ್ರೆ ವೆಚ್ಚ ಸೇರಿದಂತೆ ಎಲ್ಲ ಅನುಕೂಲ ಪಡೆಯಲು ಅರ್ಹರು ಎಂದು ತಿಳಿಸಿದ್ದಾರೆ.

ಎಂಡೋಸಲ್ಫಾನ್ ಪೀಡಿತರಿಗೆ ಅನುಕೂಲವಾಗಬೇಕೆಂಬ ಹಿನ್ನೆಲೆಯಲ್ಲಿ ಮಂಕಿಯಲ್ಲಿ ಸುಸಜ್ಜಿತ ಆಸ್ಪತ್ರೆ ನಿರ್ಮಾಣದ ನಿರ್ಣಯ ಕೈಗೊಳ್ಳಲಾಗಿದೆ ಎಂದು ಹೇಳಿದ್ದಾರೆ.

ಶಿಬಿರದಲ್ಲಿ 416 ಪೀಡಿತರ ತಪಾಸಣೆಯನ್ನು ವೈದ್ಯರು ನಡೆಸಿದರು.

*******************

ಮೈಸೂರು ಆಕಾಶವಾಣಿ ಸೌಜನ್ಯದಿಂದ ನಮ್ಮ ಜನಪದ ಕಾರ್ಯಕ್ರಮದಲ್ಲಿ ಈ ಬಾರಿ ಚಾಮರಾಜನಗರದ ಜನಪದ ಸಂಸ್ಕೃತಿ ಮಾತು, ಹಾಡು, ಕುಣಿತ ಆಯೋಜಿಸಲಾಗಿದೆ.

ಇದೇ 17 ರಂದು ನಡೆಯುವ ಕಾರ್ಯಕ್ರಮವನ್ನು ಚಾಮರಾಜನಗರ ಸಂಸದ ಸುನೀಲ್ ಬೋಸ್ ಉದ್ಘಾಟಿಸಲಿದ್ದಾರೆ.

ಕರ್ನಾಟಕದ ಗಡಿ ಜಿಲ್ಲೆಯ ಚಾಮರಾಜನಗರ ಜಾನಪದದ ತವರೂರು ಮಂಟೆ ಸ್ವಾಮಿ ಮಾದೇಶ್ವರ ಬಿಳಿಗಿರಿ ರಂಗ ಈ ನೆಲೆದ ಸಾಂಸ್ಕೃತಿಕ ನಾಯಕರು. ಇಂತಹವರ ಬದುಕಿನ ಆದರ್ಶ ಮತ್ತು ತತ್ವಗಳನ್ನು ಚಾಮರಾಜನಗರದ ವೃತ್ತಿ ಗಾಯಕರು ಗಾಯನದ ಮೂಲಕ ಪಸರಿಸುತ್ತಾ ಬಂದಿದ್ದಾರೆ.

ಚಾಮರಾಜನಗರದ ಜೆ.ಎಸ್.ಎಸ್ ಶಿಕ್ಷಣ ಸಂಸ್ಥೆ ಸಭಾಂಗಣದಲ್ಲಿ ಕಾರ್ಯಕ್ರಮ ನಡೆಯಲಿದೆ.

*******************

ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಇದೇ 18 ರಂದು ಆಯೋಜಿಸಿರುವ ಮನೆಯಂಗಳದಲ್ಲಿ ಮಾತುಕತೆ ಕಾರ್ಯಕ್ರಮದಲ್ಲಿ ಹಿರಿಯ ಜಾನಪದ ಕಲಾವಿದರಾದ ಗುರುರಾಜ್ ಹೊಸಕೋಟೆ ಭಾಗವಹಿಸಲಿದ್ದಾರೆ.

ಎಂದಿನಂತೆ ಕಾರ್ಯಕ್ರಮ ಸಂಜೆ 4 ಗಂಟೆಗೆ ನಯನ ಸಭಾಂಗಣದಲ್ಲಿ ನಡೆಯಲಿದೆ ಎಂದು ಕನ್ನಡ ಮತ್ತು ಸಂಸ್ಕೃತಿ ಇಲಾಖೆ ನಿರ್ದೇಶಕರಾದ ಡಾ.ಧರಣಿ ದೇವಿ ಮಾಲಗತ್ತಿ ತಿಳಿಸಿದ್ದಾರೆ.

********************

ಕನ್ನಡ ಚಿತ್ರರಂಗದ ಹಿರಿಯ ನಟ ಸರಿಗಮ ವಿಜಿ ನಿಧನ ಹೊಂದಿದ್ದಾರೆ. ಅವರಿಗೆ 76 ವರ್ಷ ವಯಸ್ಸಾಗಿತ್ತು. ಕಳೆದ ಕೆಲ ದಿನಗಳಿಂದಲೂ ಅವರು ಅನಾರೋಗ್ಯದಿಂದ ಬಳಲುತ್ತಿದ್ದರು.

ನಾಳೆ ಚಾಮರಾಜಪೇಟೆಯ ಟಿ.ಆರ್ ಮಿಲ್ ಬಳಿ ಬರುವ ಚಿತಾಗಾರದಲ್ಲಿ ಅಂತ್ಯ ಕ್ರಿಯೆ ನಡೆಯಲಿದೆ ಎಂದು ಕುಟುಂಬ ಮೂಲಗಳು ತಿಳಿಸಿವೆ.

ವಿಜಿ ಅವರಿಗೆ 'ಸಂಸಾರದಲ್ಲಿ ಸರಿಗಮ' ನಾಟಕ ಬಹಳ ಹೆಸರು ತಂದು ಕೊಟ್ಟಿತ್ತು. ಇದೇ ಕಾರಣಕ್ಕೆ ಅವರು ಸರಿಗಮ ವಿಜಿ ಎಂದು ಪ್ರಚಲಿತರಾದರು. ನಾಟಕದಿಂದ ಸಿನಿಮಾಕ್ಕೆ ಪದಾರ್ಪಣೆ ಮಾಡಿದ ವಿಜಿ ಅವರು ಹಲವಾರು ಸಿನಿಮಾಗಳಲ್ಲಿ ಪೋಷಕ, ಹಾಸ್ಯ ಹಾಗೂ ಖಳನಾಯಕ ಪಾತ್ರಗಳಲ್ಲಿಯೂ ನಟಿಸಿದ್ದಾರೆ.

ಸರಿಗಮ ವಿಜಿ ಅವರು ನಟಿಸಿದ್ದ ಚೊಚ್ಚಲ ಚಿತ್ರ ಬೆಳವಳದ ಮಡಿಲಲ್ಲಿ, ಅವರು ನಟಿಸಿದ್ದ ಕೊನೆಯ ಚಿತ್ರ ಡಕೋಟಾ ಪಿಕ್ಚರ್ ಆಗಿದೆ. ಅವರ ನಿಧನಕ್ಕೆ ಮಾಜಿ ಶಾಸಕ ಕೆ.ಗೋಪಾಲಯ್ಯ ಸೇರಿದಂತೆ ಹಲವು ಗಣ್ಯರು ಸಂತಾಪ ಸೂಚಿಸಿದ್ದಾರೆ.

********************

ಪ್ರತಿ ವರ್ಷದಂತೆ ಈ ಬಾರಿಯು ಲಾಲ್‌ಬಾಗ್‌ನಲ್ಲಿ ಗಣರಾಜ್ಯೋತ್ಸವ ಹಿನ್ನೆಲೆಯಲ್ಲಿ 217ನೇ ಫಲಪುಷ್ಪ ಪ್ರದರ್ಶನ ಆಯೋಜಿಸಲಾಗಿದೆ.

ನಾಳೆಯಿಂದ ಇದೇ 27ರವರೆಗೆ 12 ದಿನಗಳ ಕಾಲ ಪ್ರದರ್ಶನ ಹಮ್ಮಿಕೊಳ್ಳಲಾಗಿದೆ.

ಈ ಫಲಪುಷ್ಪ ಪ್ರದರ್ಶನವು ಹಲವು ಕಾರಣಗಳಿಂದ ವಿಶಿಷ್ಟವಾಗಿರಲಿದೆ. ಈ ಬಾರಿ ವಾಲ್ಮೀಕಿಗೆ ಗೌರವ ಸಲ್ಲಿಸಲು ಪ್ರದರ್ಶನ ಸಜ್ಜಾಗಿದ್ದು, ರಾಮಾಯಣದ ಮೂಲಕ ಪ್ರವಾಸಿಗರನ್ನು ಹೂವಿನ ಲೋಕಕ್ಕೆ ಕರೆದೊಯ್ಯಲಿದೆ.

********************

ಕೃಷಿ ಇಲಾಖೆ, ತೋಟಗಾರಿಕೆ ಇಲಾಖೆ, ಕೋಲಾರ ಜಿಲ್ಲಾ ತೋಟಗಾರಿಕೆ ವಿಭಾಗದ ಸಹಯೋಗದಲ್ಲಿ ಕೋಲಾರದ ಹಳೇ ಜಿಲ್ಲಾಧಿಕಾರಿಗಳ ಕಚೇರಿ ಆವರಣದಲ್ಲಿ ನಾಳೆಯಿಂದ 18ರ ವರೆಗೆ ಜಿಲ್ಲಾ ಮಟ್ಟದ ಸಿರಿಧಾನ್ಯ ಮತ್ತು ಸಾವಯವ ಮೇಳ ಹಾಗೂ ಫಲಪುಷ್ಪ ಪ್ರದರ್ಶನ–2025 ಆಯೋಜಿಸಲಾಗಿದೆ.

ಕಾರ್ಯಕ್ರಮದಲ್ಲಿ ಕೃಷಿ ವಸ್ತು ಪ್ರದರ್ಶನ, ಫಲಪುಷ್ಪ ಪ್ರದರ್ಶನ, ತಾಂತ್ರಿಕ ಕಾರ್ಯಾಗಾರ ಹಾಗೂ ಇತರೆ ಕಾರ್ಯಕ್ರಮಗಳನ್ನು ಜಿಲ್ಲಾ ಉಸ್ತುವಾರಿ ಸಚಿವ ಬಿ.ಎಸ್.ಸುರೇಶ್ ಉದ್ಘಾಟಿಸಲಿದ್ದಾರೆ. ಸಾರ್ವಜನಿಕರು ಇದರ ಸದುಪಯೋಗ ಪಡೆದು ಕೊಳ್ಳಬೇಕೆಂದು ಜಂಟಿಕೃಷಿ ನಿರ್ದೇಶಕರು ಮನವಿ ಮಾಡಿದ್ದಾರೆ.

**********ಮುಕ್ತಾಯ*********